**<u>ದಿನಾಂಕ 07.01.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆಃ ಅರ್ಜಿದಾರರ ಪರ ಮಾನ್ಯ ವಕೀಲರಿಂದ.</u>**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

ಪ್ರಥಮ ವರ್ತಮಾನ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 1** ಎಂದು, ದೂರು ಮತ್ತು ಮರು ಹೇಳಿಕೆಯ ದೃಢೀಕೃತ ಪ್ರತಿಗಳನ್ನು ಒಟ್ಟಾಗಿ **ನಿಪಿ 2** ಎಂದು, ಸ್ಥಳ ಪಂಚನಾಮೆಯ ದೃಢೀಕೃತ ಪ್ರತಿಯನ್ನು **ನಿಪಿ 3** ಎಂದು, ನಕ್ಷೆಯ ದೃಢೀಕೃತ ಪ್ರತಿಯನ್ನು **ನಿಪಿ 4** ಎಂದು, ಐಎಮ್‌ವಿ ವರದಿಯ ದೃಢೀಕೃತ ಪ್ರತಿಯನ್ನು **ನಿಪಿ 5** ಎಂದು, ಗಾಯದ ಪ್ರಮಾಣ ಪತ್ರದ ದೃಢೀಕೃತ ಪ್ರತಿಯನ್ನು **ನಿಪಿ 6** ಎಂದು, ಡಿಸ್ಚಾರ್ಜ್ ಸಮರಿಗಳನ್ನು ಒಟ್ಟಾಗಿ **ನಿಪಿ 7** ಎಂದು, ಮೋಟಾರು ವಾಹನ ಕಾಯ್ದೆಯ ಕಲಂ 133 ರಡಿ ನೀಡಿರುವ ನೋಟೀಸಿಗೆ ನೀಡಿರುವ ಉತ್ತರದ ದೃಢೀಕೃತ ಪ್ರತಿಯನ್ನು **ನಿಪಿ 8** ಎಂದು, ಪೊಲೀಸ್ ಇಂಟಿಮೇಷನ್ ಗಳ ದೃಢೀಕೃತ ಪ್ರತಿಗಳನ್ನು ಒಟ್ಟಾಗಿ **ನಿಪಿ 9** ಎಂದು, ದೋಷಾರೋಪಣ ಪಟ್ಟಿಯ ದೃಢೀಕೃತ ಪ್ರತಿಯನ್ನು **ನಿಪಿ 10** ಎಂದು, ಮೆಡಿಕಲ್ ಬಿಲ್ಲುಗಳನ್ನು **ನಿಪಿ 11** ಎಂದು, ವೈದ್ಯರ ಸಲಹಾ ಚೀಟಿಗಳನ್ನು **ನಿಪಿ 12** ಎಂದು, ಹೊರ ರೋಗಿ ದಾಖಲಾತಿಯನ್ನು **ನಿಪಿ 13** ಎಂದು, ನೇಮಕಾತಿ ಆದೇಶವನ್ನು **ನಿಪಿ 14** ಎಂದು, ವೇತನ ಪಟ್ಟಿಗಳನ್ನು **ನಿಪಿ 15** ಎಂದು, ಐಟಿ ರಿಟ್ರನ್ಸ್ ಗಳನ್ನು **ನಿಪಿ 16** ಎಂದು, ಕೆಲಸದಿಂದ ಬಿಡುಗಡೆ ಹೊಂದಿದ ಬಗ್ಗೆ ಹಾಜರುಪಡಿಸಿರುವ ದಾಖಲಾತಿಯನ್ನು **ನಿಪಿ 17** ಎಂದು, ಅಂಚೆ ರಶೀದಿಯನ್ನು **ನಿಪಿ 18** ಎಂದು, ಅಕೌಂಟ್ ಸ್ಟೇಟ್ ಮೆಂಟ್ ಅನ್ನು **ನಿಪಿ 19** ಎಂದು, ಚಾಲನಾ ಪರವಾನಗಿ ಮತ್ತು ಆಧಾರ್ ಕಾರ್ಡಿನ ನೋಟರಿ ಪ್ರತಿ(ಮೂಲ ದಾಖಲಾತಿಯೊಂದಿಗೆ ಹೋಲಿಕೆ ಮಾಡಿ ಮೂಲ ದಾಖಲಾತಿಯನ್ನು ಹಿಂದಿರುಗಿಸಲಾಯಿತು)ಗಳನ್ನು ಕ್ರಮವಾಗಿ **ನಿಪಿ 20 ಮತ್ತು 21** ಎಂದು, ಮೋಟಾರು ವಾಹನ

ಕಾಯ್ದೆಯ ಕಲಂ 133 ರಡಿ ನೀಡಿರುವ ನೋಟೀಸಿನ ಧೃಡಿಕೃತ ಪ್ರತಿಯನ್ನು **ನಿಪಿ 22** ಗುರುತಿಸಲಾಯಿತು.

1ನೇ ಎದುರುದಾರರು ಏಕ ಪಕ್ಷೀಯವಾಗಿರುವುದರಿಂದ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಪಾಟೀ ಸವಾಲುಃ 2ನೇ ಎದುರುದಾರರ ಪರ ಮಾನ್ಯ ವಕೀಲರಿಂದ.**

ಎದುರುದಾರರ ಪರ ಮಾನ್ಯ ವಕೀಲರು ಗೈರು ಹಾಜರಿದ್ದು ಪಾಟೀ ಸವಾಲನ್ನು ಮುಂದೂಡಲಾಯಿತು .

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**